Akashvani : Bangalore

National Bulletin In Kannada

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

25.03.2025 19.35 hrs

<><*<><>*><>

ಮುಖ್ಯಾಂಶಗಳು

- ೨೦೨೫ರ ಹಣಕಾಸು ವಿಧೇಯಕಕ್ಕೆ ಲೋಕಸಭೆಯಲ್ಲಿ ಅಂಗೀಕಾರ
- ಒಂದು ರಾಷ್ಟ್ರ, ಒಂದು ಚುನಾವಣೆ ಕುರಿತ ಜಂಟಿ ಸಂಸದೀಯ ಸಮಿತಿಯ ಅವಧಿ ವಿಸ್ತರಣೆ
- ಹಸಿರು, ಡಿಜಿಟಲ್ ಶಿಪ್ಪಿಂಗ್ ಕಾರಿಡಾರ್‌ಗಾಗಿ ಭಾರತ - ಸಿಂಗಾಪುರ ಒಪ್ಪಂದ
- ಕ್ಷಯರೋಗ ವಿರುದ್ಧದ ಹೋರಾಟದಲ್ಲಿ ಭಾರತ ಗಮನಾರ್ಹ ಪ್ರಗತಿ- ಪ್ರಧಾನಿ ನರೇಂದ್ರ ಮೋದಿ
- ಐಪಿಎಲ್ ಟಿ-೨೦ ಕ್ರಿಕೆಟ್; ಗುಜರಾತ್ ಟೈಟಾನ್ಸ್ - ಪಂಜಾಬ್ ಕಿಂಗ್ಸ್ ಮುಖಾಮುಖಿ

<><*<><>*><>

ಲೋಕಸಭೆಯು ೨೦೨೫ರ ಹಣಕಾಸು ವಿಧೇಯಕವನ್ನು ಅಂಗೀಕರಿಸಿದೆ. ಈ ವಿಧೇಯಕವು ೨೦೨೫-೨೬ ರ ಹಣಕಾಸು ವರ್ಷಕ್ಕೆ ಕೇಂದ್ರ ಸರ್ಕಾರದ ಹಣಕಾಸು ಪ್ರಸ್ತಾವನೆಗಳನ್ನು ಜಾರಿಗೆ ತರಲು ಪ್ರಯತ್ನಿಸುತ್ತದೆ. ವಿಧೇಯಕ ಮೇಲಿನ ಚರ್ಚೆಗೆ ಉತ್ತರಿಸಿದ ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್, ಹಣಕಾಸು ವಿಧೇಯಕ ೨೦೨೫, ತೆರಿಗೆದಾರರನ್ನು ಗೌರವಿಸಲು ಮತ್ತು ವ್ಯವಹಾರವನ್ನು ಸುಲಭಗೊಳಿಸಲು ಅಭೂತಪೂರ್ವ ತೆರಿಗೆ ಪರಿಹಾರವನ್ನು ಒದಗಿಸುತ್ತದೆ ಎಂದು ಹೇಳಿದರು. ಹೊಸ ತೆರಿಗೆ ವ್ಯವಸ್ಥೆಯಡಿಯಲ್ಲಿ ೧೨ ಲಕ್ಷ ರೂಪಾಯಿಗಳ ಆದಾಯದವರೆಗೆ ಶೂನ್ಯ ಆದಾಯ ತೆರಿಗೆ ಇರಲಿದೆ ಎಂದು ಅವರು ತಿಳಿಸಿದರು. ಮುಂದಿನ ಮಳೆಗಾಲದ ಅಧಿವೇಶನದಲ್ಲಿ ಹೊಸ ಆದಾಯ ತೆರಿಗೆ ವಿಧೇಯಕವನ್ನು ಚರ್ಚೆಗೆ ತೆಗೆದುಕೊಳ್ಳುವ ಸಾಧ್ಯತೆಯಿದೆ ಎಂದು ಸಚಿವೆ ನಿರ್ಮಲಾ ಸೀತಾರಾಮನ್ ಹೇಳಿದರು.

ಧ್ವನಿ: ನಿರ್ಮಲಾ ಸೀತಾರಾಮನ್, ಕೇಂದ್ರ ಸಚಿವೆ ( ೨೦ ಸೆಕೆಂಡ್)

ದೇಶದ ಜನರ ನಿರೀಕ್ಷೆ ಮತ್ತು ೨೦೪೭ರ ವೇಳೆಗೆ ವಿಕಸಿತ ಭಾರತದ ಗುರಿಯ ನಿಟ್ಟಿನಲ್ಲಿ ಕೇಂದ್ರ ಸರ್ಕಾರವು ಈ ಹಣಕಾಸು ವಿಧೇಯಕದ ಮೂಲಕ ಸಾಕಷ್ಟು ಕ್ರಮಗಳನ್ನು ತೆಗೆದುಕೊಂಡಿದೆ. ಇದು ಉತ್ಪಾದನಾ ಘಟಕಗಳನ್ನು ಬೆಂಬಲಿಸುತ್ತದೆ, ರಫ್ತುಗಳನ್ನು ಉತ್ತೇಜಿಸುತ್ತದೆ, ವ್ಯಾಪಾರವನ್ನು

ಸುಗಮಗೊಳಿಸುತ್ತದೆ ಮತ್ತು ಸಾಮಾನ್ಯ ಜನರಿಗೆ ಪರಿಹಾರವನ್ನು ಒದಗಿಸುತ್ತದೆ ಎಂದು ಅವರು ವಿವರಿಸಿದರು.

<><*<><>*><>

ಈ ಹಣಕಾಸು ವಿಧೇಯಕವು, ಕೈಗಾರಿಕಾ ಸರಕುಗಳಿಗೆ ೬ ಕಸ್ಟಮ್ಸ್ ಸುಂಕ ದರಗಳನ್ನು ತೆಗೆದು ಹಾಕಲು ಪ್ರಸ್ತಾಪಿಸಿದೆ. ವಿದ್ಯುತ್ ವಾಹನಗಳಿಗೆ ಬ್ಯಾಟರಿ ಉತ್ಪಾದನೆಯನ್ನು ಉತ್ತೇಜಿಸಲು ಸರ್ಕಾರವು ಹಣಕಾಸು ವಿಧೇಯಕವು ೩೫ ಉತ್ಪನ್ನಗಳಲ್ಲಿ ವಿನಾಯಿತಿ ಪಡೆದ ಸುಂಕ ಪಟ್ಟಿಯಲ್ಲಿ ಸೇರಿಸಲು ಪ್ರಸ್ತಾಪಿಸಿದೆ ಎಂದು ಸಚಿವೆ ನಿರ್ಮಲಾ ಸೀತಾರಾಮನ್ ಮಾಹಿತಿ ನೀಡಿದರು. ಇದಕ್ಕೂ ಮುನ್ನ ಚರ್ಚೆಯಲ್ಲಿ ಭಾಗವಹಿಸಿದ್ದ ಕಾಂಗ್ರೆಸ್‌ನ ಎಸ್.ಜ್ಯೋತಿ ಮಣಿ, ದೇಶದಲ್ಲಿ ನಿರುದ್ಯೋಗ ಹೆಚ್ಚಾಗಿದೆ. ೧೨ ಲಕ್ಷ ರೂಪಾಯಿವರೆಗಿನ ಆದಾಯಕ ತೆರಿಗೆ ರಿಯಾಯಿತಿಯು ಕೇವಲ ೧ ಕೋಟಿ ಜನರಿಗೆ ಪ್ರಯೋಜನ ನೀಡಲಿದೆ ಎಂದು ಹೇಳಿದರು.

<><*<><>*><>

ಸಂಸದ್ ಆದರ್ಶ್ ಗ್ರಾಮ ಯೋಜನೆ ಅಡಿಯಲ್ಲಿ ದೇಶಾದ್ಯಂತ ೧ ಸಾವಿರದ ೬೩೬ ಗ್ರಾಮಪಂಚಾಯಿತಿಗಳು, ಗ್ರಾಮಾಭಿವೃದ್ಧಿ ಯೋಜನೆಯನ್ನು ಪೂರ್ಣಗೊಳಿಸಿವೆ ಎಂದು ಕೇಂದ್ರ ಗ್ರಾಮೀಣಾಭಿವೃದ್ಧಿ ಸಚಿವ ಶಿವರಾಜ್ ಸಿಂಗ್ ಚೌಹಾಣ್ ತಿಳಿಸಿದ್ದಾರೆ. ಲೋಕಸಭೆಯಲ್ಲಿಂದು ಪ್ರಶ್ನೆಯೊಂದಕ್ಕೆ ಲಿಖಿತ ಉತ್ತರ ನೀಡಿದ ಸಚಿವರು, ಈ ಯೋಜನೆಯು ೨೦೧೪ ರ ಅಕ್ಟೋಬರ್‌ನಿಂದ ಜಾರಿಯಲ್ಲಿದ್ದು, ಮಾನವ ಸಂಪನ್ಮೂಲ ಅಭಿವೃದ್ಧಿ, ಸಾಮಾಜಿಕ ಅಭಿವೃದ್ಧಿ ಹಾಗೂ ಮೂಲಸೌಕರ್ಯಗಳನ್ನು ಈ ಯೋಜನೆ ಒಳಗೊಂಡಿದೆ ಎಂದು ವಿವರಿಸಿದರು.

<><*<><>*><>

ರಾಜ್ಯಸಭೆಯು ವಿಪತ್ತು ನಿರ್ವಹಣಾ ತಿದ್ದುಪಡಿ ವಿಧೇಯಕ ೨೦೨೪ ಅನ್ನು ಚರ್ಚೆಗೆ ಕೈಗೆತ್ತಿಕೊಂಡಿದೆ. ಚರ್ಚೆಯನ್ನು ಆರಂಭಿಸಿದ ಕಾಂಗ್ರೆಸ್‌ನ ನೀರಜ್ ಡಾಂಗಿ, ವಿಧೇಯಕವು P೬ ಅಂಖಇS ನಿಧಿಯ ಕುರಿತು ಅಥವಾ ಅದನ್ನು ಹೇಗೆ ಬಳಸಲಾಗುವುದು ಎಂಬುದರ ಕುರಿತು ವಿವರಗಳನ್ನು ನಿರ್ದಿಷ್ಟಪಡಿಸಿಲ್ಲ ಎಂದು ಆಕ್ಷೇಪಿಸಿದರು. ಬಿಜೆಪಿಯ ಬ್ರಿಜ್ ಲಾಲ್ ಮಾತನಾಡಿ, ವಿಪತ್ತು ನಿರ್ವಹಣೆಯ ಮುಖ್ಯ ಜವಾಬ್ದಾರಿ ರಾಜ್ಯ ಸರ್ಕಾರಗಳ ಮೇಲಿದೆ. ವಿಪತ್ತುಗಳ ಸಂದರ್ಭದಲ್ಲಿ ಕೇಂದ್ರವು ರಾಜ್ಯಗಳಿಗೆ ಎಲ್ಲಾ ಸಹಾಯವನ್ನು ಒದಗಿಸುತ್ತದೆ ಎಂದು ಹೇಳಿದರು. ತ್ವರಿತ ಪ್ರತಿಕ್ರಿಯೆಗಾಗಿ ವಿಪತ್ತು ಪೀಡಿತ ಪ್ರದೇಶಗಳಲ್ಲಿ ಓಆಖಈ ತಂಡಗಳನ್ನು ಸ್ಥಾಪಿಸಲಾಗಿದೆ. ಕೇಂದ್ರ ಸರ್ಕಾರವು ೨೦೨೩ರ ಜೂನ್ ೨೩ ರಂದು ೧೯ ರಾಜ್ಯಗಳಲ್ಲಿ Sಆಖಈ ತಂಡಗಳ ಸ್ಥಾಪನೆಗೆ ಆರು ಸಾವಿರದ ೧೯೪ ಕೋಟಿ ರೂಪಾಯಿಗಳನ್ನು ನೀಡಿದೆ ಎಂದು ಅವರು ತಿಳಿಸಿದರು.

<><*<><>*><>

’ಒಂದು ರಾಷ್ಟ್ರ, ಒಂದು ಚುನಾವಣೆ’ ಕುರಿತಾದ ಜಂಟಿ ಸಂಸದೀಯ ಸಮಿತಿಯ ಅವಧಿಯನ್ನು ಸಂಸತ್ತಿನ ಮಳೆಗಾಲದ ಅಧಿವೇಶನದ ಕೊನೆಯ ವಾರದ ಮೊದಲ ದಿನದವರೆಗೆ ವಿಸ್ತರಿಸಲಾಗಿದೆ. ಈ ಸಂಬಂಧ ಸಮಿತಿಯ ಅಧ್ಯಕ್ಷ ಪಿ.ಪಿ.ಚೌಧರಿ ಅವರು, ಲೋಕಸಭೆಯಲ್ಲಿಂದು ಮಂಡಿಸಿದ ನಿರ್ಣಯವನ್ನು ಸದನವು ಅನುಮೋದಿಸಿದೆ.

<><*<><>*><>

ಭಾರತ ಮತ್ತು ಸಿಂಗಾಪುರ ಇಂದು ಹಸಿರು ಮತ್ತು ಡಿಜಿಟಲ್ ಶಿಪ್ಪಿಂಗ್ ಕಾರಿಡಾರ್‌ಗಾಗಿ ಒಪ್ಪಂದಕ್ಕೆ ಸಹಿ ಹಾಕಿದ್ದು, ಇದು ಡಿಜಿಟಲೀಕರಣ ಮತ್ತು ಡಿಕಾರ್ಬೊನೈಸೇಶನ್ ಮೇಲೆ ಕೇಂದ್ರೀಕರಿಸಿದೆ. ಇದು ಎರಡೂ ದೇಶಗಳ ನಡುವಿನ ಸಹಯೋಗವನ್ನು ಹೆಚ್ಚಿಸುತ್ತದೆ ಮತ್ತು ಶೂನ್ಯ ಅಥವಾ ಶೂನ್ಯಕ್ಕೆ ಸಮೀಪವಿರುವ ಹಸಿರು ಮನೆ ಅನಿಲ-ಜಿಎಚ್‌ಜಿ ಹೊರಸೂಸುವಿಕೆ ತಂತ್ರಜ್ಞಾನಗಳ ಅಭಿವೃದ್ಧಿ ಮತ್ತು ಬಳಕೆಯನ್ನು ವೇಗಗೊಳಿಸಲು ಸಹಾಯ ಮಾಡುತ್ತದೆ ಹಾಗೂ ಡಿಜಿಟಲ್ ಪರಿಹಾರಗಳನ್ನು ಅಳವಡಿಸಿಕೊಳ್ಳುತ್ತವೆ. ಕೇಂದ್ರ ಬಂದರು, ಹಡಗು ಮತ್ತು ಜಲಮಾರ್ಗಗಳ ಸಚಿವ ಸರ್ಬಾನಂದ ಸೋನಾವಾಲಾ ಮಾತನಾಡಿ, ಉನ್ನತ ಮಟ್ಟದ ಸಾಗರ ವಲಯದ ನಿಯೋಗದೊಂದಿಗೆ ಸಿಂಗಾಪುರಕ್ಕೆ ಭೇಟಿ ನೀಡಿರುವುದು ದೀರ್ಘಕಾಲದ ಸಂಬಂಧವನ್ನು ಬಲಪಡಿಸುತ್ತದೆ. ಸಮಗ್ರ ಕಾರ್ಯತಂತ್ರವನ್ನು ಬಲಪಡಿಸುತ್ತದೆ. ಅಲ್ಲದೆ ಸಮಗ್ರ ಕಾರ್ಯತಂತ್ರದ ಸಹಭಾಗಿತ್ವವು ಉಭಯ ದೇಶಗಳ ನಡುವಿನ ಸಹಕಾರವನ್ನು ವಿಸ್ತರಿಸುತ್ತದೆ ಎಂದು ಹೇಳಿದರು.

<><*<><>*><>

ಕ್ಷಯರೋಗದ ವಿರುದ್ಧದ ಭಾರತದ ಹೋರಾಟ ಗಮನಾರ್ಹ ಪ್ರಗತಿಯನ್ನು ಕಾಣುತ್ತಿದೆ ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದ್ದಾರೆ. ಇತ್ತೀಚೆಗೆ ಮುಕ್ತಾಯಗೊಂಡ ನೂರು ದಿನಗಳ ಕ್ಷಯಮುಕ್ತ ಭಾರತ ಅಭಿಯಾನದ ಪ್ರಮುಖ ಒಳನೋಟಗಳ ಕುರಿತು ಕೇಂದ್ರ ಆರೋಗ್ಯ ಸಚಿವ ಜೆ.ಪಿ.ನಡ್ಡಾ ಅವರ ಲೇಖನವನ್ನು ಸಾಮಾಜಿಕ ಜಾಲತಾಣದಲ್ಲಿ ಹಂಚಿಕೊಂಡ ಪ್ರಧಾನಿ, ಈ ಅಭಿಯಾನವು ಕ್ಷಯ ಮುಕ್ತ ಭಾರತಕ್ಕೆ ಬಲವಾದ ಅಡಿಪಾಯವನ್ನು ಹಾಕಿದೆ ಎಂದು ತಿಳಿಸಿದ್ದಾರೆ. ವಿಶ್ವ ಕ್ಷಯರೋಗ ದಿನದ ಅಂಗವಾಗಿ ತಮ್ಮ ಲೇಖನದಲ್ಲಿ ಜೆ.ಪಿ.ನಡ್ಡಾ ಅವರು, ಕ್ಷಯರೋಗವನ್ನು ತೊಡೆದು ಹಾಕಲು ಭಾರತವು ಹೇಗೆ ತನ್ನ ವಿಧಾನವನ್ನು ಮರು ವ್ಯಾಖ್ಯಾನಿಸುತ್ತಿದೆ ಎಂಬುದನ್ನು ವಿವರಿಸಿದರು.  ನೂರು ದಿನಗಳ ’ಕ್ಷಯಮುಕ್ತ ಭಾರತ’ ಅಭಿಯಾನವು, ನಾವೀನ್ಯತೆ ಶಕ್ತಿಯನ್ನು ಪ್ರದರ್ಶಿಸಿದೆ. ಅಲ್ಲದೆ, ರೋಗವನ್ನು ಎದುರಿಸುವಲ್ಲಿ ಸಮುದಾಯ ಸಜ್ಜುಗೊಳಿಸುವ ಮಹತ್ವವನ್ನು ಒತ್ತಿ ಹೇಳಿದೆ ಎಂದರು.

<><*<><>*><>

ಮುಂಬೈನಲ್ಲಿ ಮೇ ೧ ರಿಂದ ೪ರವರೆಗೆ ನಡೆಯಲಿರುವ ವಿಶ್ವ ದೃಶ್ಯ, ಶ್ರವಣ ಮತ್ತು ಮನರಂಜನಾ ಶೃಂಗಸಭೆ - ವೇವ್ಸ್ ೨೦೨೫ ಕ್ಕೆ ಬಾಲಿಹುಡ್ ನಟ ಅಕ್ಷಯ್ ಕುಮಾರ್ ಶುಭಾಶಯ ಕೋರಿದ್ದಾರೆ. ಸಾಮಾಜಿಕ ಜಾಲತಾಣದಲ್ಲಿ ವಿಡಿಯೋ ಹಂಚಿಕೊಂಡಿರುವ ಅವರು, ವೇವ್ಸ್ ಶೃಂಗಸಭೆಯು ಒಂದು ಮೈಲುಗಲ್ಲಾಗಿದೆ ಎಂದು ಶ್ಲಾಘಿಸಿದ್ದಾರೆ. ಈ ಶೃಂಗಸಭೆಯು ಜಗತ್ತಿನಾದ್ಯಂತದ ಕ್ರಿಯೇಟರ್‌ಗಳಿಗೆ ಪರಿಪೂರ್ಣ ವೇದಿಕೆಯಾಗುವುದಲ್ಲದೆ, ಜಾಗತಿಕ ಮನರಂಜನೆಯ ಭವಿಷ್ಯವನ್ನು ಬದಲಾಯಿಸುವ ವಿಶ್ವದ ಅತ್ಯಂತ ಶಕ್ತಿಶಾಲಿ ಸಭೆಯಾಗಲಿದೆ ಎಂದು ಪ್ರತಿಪಾದಿಸಿದ್ದಾರೆ. ಅನಿಮೇಷನ್, ಗೇಮಿಂಗ್, ವಿಷುಯಲ್ ಎಫೆಕ್ಟ್ಸ್ ಮತ್ತು ಎಕ್ಸ್‌ಟೆಂಡೆಡ್ ರಿಯಾಲಿಟಿಯಲ್ಲಿ ಹೊಸ ಅವಕಾಶಗಳನ್ನು ಅನ್ವೇಷಿಸಲು ಕ್ರಿಯೇಟರ್‌ಗಳು, ಉದ್ಯಮಿಗಳು ಮತ್ತು ಹೂಡಿಕೆದಾರರನ್ನು ವೇವ್ಸ್ ಒಟ್ಟುಗೂಡಿಸಲಿದೆ ಎಂದು ನಟ ಅಕ್ಷಯ್ ಕುಮಾರ್ ಹೇಳಿದ್ದಾರೆ. ಅನಿಮೇಷನ್, ವಿಷುಯಲ್ ಎಫೆಕ್ಟ್ಸ್, ಗೇಮಿಂಗ್, ಕಾಮಿಕ್ಸ್ ಮತ್ತು ಎಕ್ಸ್‌ಟೆಂಡೆಡ್ ರಿಯಾಲಿಟಿ ವಲಯಗಳಲ್ಲಿ ಭಾರತವನ್ನು ಜಾಗತಿಕ ಶಕ್ತಿ ಕೇಂದ್ರವನ್ನಾಗಿ ಮಾಡುವ ದೃಷ್ಟಿಕೋನದೊಂದಿಗೆ, ಈ ಶೃಂಗಸಭೆಯು ಕೌಶಲ್ಯ ಅಭಿವೃದ್ಧಿ, ಉದ್ಯಮಶೀಲತೆ ಮತ್ತು ಗಡಿಯಾಚೆಗಿನ ಸಹಯೋಗಗಳನ್ನು ಉತ್ತೇಜಿಸುವ ಗುರಿಯನ್ನು ಹೊಂದಿದೆ.

<><*<><>*><>

ಜಮ್ಮು ಮತ್ತು ಕಾಶ್ಮೀರದಲ್ಲಿ ಪ್ರತ್ಯೇಕತಾವಾದವು ಈಗ ಇತಿಹಾಸ. ಹುರಿಯತ್‌ಗೆ ಸಂಬಂಧಿಸಿದ ಎರಡು ಸಂಘಟನೆಗಳು ಪ್ರತ್ಯೇಕವಾದದ ಚಟುವಟಿಕೆಗಳೊಂದಿಗೆ ಸಂಬಂಧಗಳನ್ನು ಕಡಿದುಗೊಂಡಿವೆ. ರಾಷ್ಟ್ರೀಯ ಏಕತೆಯತ್ತ ಇದೊಂದು ಪ್ರಮುಖ ಹೆಜ್ಜೆಯಾಗಿದೆ ಎಂದು ಕೇಂದ್ರ ಗೃಹ ಸಚಿವ ಅಮಿತ್ ಶಾ ಹೇಳಿದ್ದಾರೆ. ಎಲ್ಲಾ ಸಂಘಟನೆಗಳು ಪ್ರತ್ಯೇಕತಾವಾದವನ್ನು ತಿರಸ್ಕರಿಸಬೇಕು ಎಂದು ಅವರು ಒತ್ತಾಯಿಸಿದರು. ಈ ಬೆಳವಣಿಗೆಯು ಶಾಂತಿಯುತ ಮತ್ತು ಏಕೀಕೃತ ಭಾರತಕ್ಕಾಗಿ ಪ್ರಧಾನಿ ನರೇಂದ್ರ ಮೋದಿ ಅವರ ದೃಷ್ಟಿಕೋನವನ್ನು ಪ್ರತಿಬಿಂಬಿಸುತ್ತದೆ ಎಂದು ಸಚಿವ ಅಮಿತ್ ಶಾ ಹೇಳಿದರು.

<><*<><>*><>

ಗಾಜಾ ಪಟ್ಟಿಯ ಮೇಲೆ ಇಂದು ಇಸ್ರೇಲ್ ನಡೆಸಿದ ದಾಳಿಯಲ್ಲಿ ಕನಿಷ್ಠ ೨೩ ಪ್ಯಾಲಿಸ್ತೇನಿಯನ್ನರು ಮೃತಪಟ್ಟಿದ್ದಾರೆ. ಗಾಜಾದಲ್ಲಿ ಹಮಾಸ್ ವಿರುದ್ಧ ಇಸ್ರೇಲ್ ಸೇನೆಯು ಕಳೆದ ಒಂದು ವಾರದಿಂದ ತನ್ನ ಕಾರ್ಯಾಚರಣೆಯನ್ನು ಪುನರ್ ಆರಂಭಿಸಿದಾಗಿನಿಂದ ಇದುವರೆಗೂ ಸುಮಾರು ೭೦೦ ಜನರು ಸಾವನ್ನಪ್ಪಿದ್ದಾರೆ ಎಂದು ಪ್ಯಾಲಿಸ್ತೇನಿಯನ್ ಆರೋಗ್ಯ ಇಲಾಖೆ ಅಧಿಕಾರಿಗಳು

ತಿಳಿಸಿದ್ದಾರೆ. ಗಾಜಾ ನಗರದ ಜಬಾಲಿಯಾ ಬೀಟ್ ಲಿಹಿಯಾ, ಬೀಟ್ ಅನೌನ್ ಮತ್ತು ಶಜೈಯಾ ಪಟ್ಟಣಗಳ ಮೇಲೆ ಇಸ್ರೇಲ್ ರಾಕೆಟ್ ದಾಳಿ ನಡೆಸಿದೆ.

<><*<><>*><>

ಕೇಂದ್ರ ಕ್ರೀಡಾ ಮತ್ತು ಯುವಜನ ವ್ಯವಹಾರ ಸಚಿವಾಲಯ, ಭಾರತೀಯ ಕ್ರೀಡಾ ಪ್ರಾಧಿಕಾರ ಹಾಗೂ ಯೋಗಾಸನ ಭಾರತ ಸಹಯೋಗದಲ್ಲಿ ಇದೇ ಮಾರ್ಚ್ ೨೯ ರಿಂದ ೩೧ರವರೆಗೆ ನವದೆಹಲಿಯಲ್ಲಿ ನಡೆಯಬೇಕಿದ್ದ ಎರಡನೇ ಆವೃತ್ತಿಯ ಏಷ್ಯನ್ ಯೋಗಾಸನ ಸ್ಪೋರ್ಟ್ಸ್ ಚಾಂಪಿಯನ್‌ಶಿಪ್ ಅನ್ನು ರಂಜಾನ್ ಮಾಸದ ಹಿನ್ನೆಲೆಯಲ್ಲಿ ಮುಂದೂಡಲಾಗಿದೆ. ಮರುನಿಗದಿಯಂತೆ ಏಪ್ರಿಲ್ ೨೫ ರಿಂದ ೨೮ರವರೆಗೆ ಏಷ್ಯನ್ ಯೋಗಾಸನ ಸ್ಪೋರ್ಟ್ಸ್ ಚಾಂಪಿಯನ್‌ಶಿಪ್ ನಡೆಯಲಿದೆ.

<><*<><>*><>

ಗುಜರಾತ್‌ನ ಅಹಮದಾಬಾದ್‌ನ ನರೇಂದ್ರ ಮೋದಿ ಕ್ರೀಡಾಂಗಣದಲ್ಲಿಂದು ನಡೆಯುತ್ತಿರುವ ಇಂಡಿಯನ್ ಪ್ರೀಮಿಯರ್ ಲೀಗ್- ಐಪಿಎಲ್ ಕ್ರಿಕೆಟ್ ಪಂದ್ಯದಲ್ಲಿಂದು ಗುಜರಾತ್ ಟೈಟಾನ್ಸ್ ಮತ್ತು ಪಂಜಾಬ್ ಕಿಂಗ್ಸ್ ಮುಖಾಮುಖಿಯಾಗಿವೆ. ಟಾಸ್ ಗೆದ್ದ ಗುಜರಾತ್ ಟೈಟಾನ್ಸ್ ತಂಡ, ಫೀಲ್ಡಿಂಗ್ ಆಯ್ಕೆ ಮಾಡಿಕೊಂಡಿದೆ.

<><*<><>*><>

ದೇಶದಲ್ಲಿ ಸಂಭವಿಸುವ ರಸ್ತೆ ಅಪಘಾತಗಳಲ್ಲಿ ಶೇಕಡ ೬೦ಕ್ಕೂ ಹೆಚ್ಚು ಸಾವುಗಳು ೧೮ ರಿಂದ ೪೫ ವರ್ಷದೊಳಗಿನವರಲ್ಲಿ ಸಂಭವಿಸುತ್ತವೆ ಎಂದು ಕೇಂದ್ರ ರಸ್ತೆ ಸಾರಿಗೆ ಮತ್ತು ಹೆದ್ದಾರಿ ಸಚಿವ ನಿತಿನ್ ಗಡ್ಕರಿ ಹೇಳಿದ್ದಾರೆ.

<><*<> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <>*><>

<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ನಾಳೆ ಬೆಳಗ್ಗೆ ೮.೦೫ ಕ್ಕೆ<>*><>